179(125) ಶ್ರೀ ಶಿವಶಂಕರ ರೆಡ್ಡಿ ಎನ್ ಹೆಚ್

ವಿಷಯ ಶಾದಿಮಹಲ್ ನಿರ್ಮಾಣ ಮಾನ್ಯ ಕಾರ್ಮಿಕ ಮತ್ತು ಅಲ್ಪ ಕಲ್ಯಾಣ ಖಾತೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ) 2006-07 ನೇ ಸಾಲಿನಲ್ಲಿ ಡಾ ನಂಜುಂಡಪ್ಪರವರ ವರದಿಯಲ್ಲಿ ಸೂಚಿಸಿದಂತೆ ಹಿಂದುಳಿದ ತಾಲ್ಲೂಕುಗಳಲ್ಲಿ ಶಾದಿಮಹಲ್ ನಿರ್ಮಾಣಕ್ಕೆ ಸರ್ಕಾರಿ ಆದೇಶ ಪ್ರಕಟಿಸುವುದು ನಿಜವೇ?

ಆ) ಹಾಗಿದ್ದಲ್ಲಿ ಎಷ್ಟು ತಾಲ್ಲೂಕುಗಳಲ್ಲಿ ಶಾದಿಮಹಲ್ ನಿರ್ಮಾಣಕ್ಕೆ ಸಹಾಯ ಹಣ ಒದಗಿಸಲಾಗಿದೆ? (ಹಣದ ಮೊತ್ತ ಹಾಗೂ ಸಂಖ್ಯಾ ವಿವರ ನೀಡುವುದು?

ಇ) ಗೌರಿಬಿದನೂರು ಹಿಂದುಳಿದ ತಾಲ್ಲೂಕಾಗಿದ್ದು ಶಾದಿಮಹಲ್ ಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿದ್ದರೂ ಸಹ ಹಣ ಬಿಡುಗಡೆ ಮಾಡದಿರಲು ಕಾರಣವೇನು?

ಈ) ಈಗಲಾದರೂ ಹಣ ಬಿಡುಗಡೆ ಮಾಡಿ ಅನುಕೂಲ ಮಾಡಿ ಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಇಕ್ಬಾಲ್ ಅನ್ಸಾರಿ

ಅ) ಈ ಸಂಬಂದ ಯಾವುದೇ ಆದೇಶ ಹೊರಡಿಸಿರುವುದಿಲ್ಲ

ಆ) ಉದ್ಭವಿಸುವುದಿಲ್ಲ

ಇ) ಅರೇಬಿಯನ್ ಅನ್ಬರುಲ್ ಬಾಕಿಯಾಸ್ ಕಮಿಟಿ ಗೌರಿಬಿದನೂರು ಇವರ ವತಿಯಿಂದ ನಿರ್ಮಿಸುತ್ತಿರುವ ಶಾದಿಮಹಲ್ ಕಟ್ಟಡದ ಮಂಜೂರಾತಿ ಗೆ ಪ್ರಸ್ತಾವನೆ ಬಂದಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ

ಈ) ಅನುದಾನ ಲಭ್ಯತೆ ಹಾಗೂ ಮಾರ್ಗಸೂಚಿಗಳನ್ವಯ ಮಂಜೂರಾತಿ ನೀಡಲಾಗುವುದು